**APRIL 14, 2026**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ಹಲವು ವಿಧಾಯಕ** ಕಾರ್ಯಕ್ರಮಗಳ ಮೂಲಕ ಇಂದು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮ ದಿನ ಆಚರಣೆ.

- **ಗ್ಯಾರಂಟಿಗಳ ಜೊತೆಗೆ** ಅಭಿವೃದ್ಧಿ ಸಾಧ್ಯವಾಗಿಸಿದ ಸರ್ಕಾರ–ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಪಾದನೆ.

- **ಶಾಸನ ಸಭೆಗಳಲ್ಲಿ ಮಹಿಳಾ** ಪ್ರಾತಿನಿಧ್ಯ ಹೆಚ್ಚುವುದರಿಂದ ವ್ಯವಸ್ಥೆಯಲ್ಲಿ ಸಂವೇದನಾಶೀಲತೆ–ಪ್ರಧಾನ ಮಂತ್ರಿ ನರೇಂದ್ರ ಮೋದಿ ಅಭಿಮತ.

- **ನಾಳೆಯಿಂದ ಮೂರು ದಿನಗಳ ಕಾಲ** ಕಲಬುರಗಿ ಜಿಲ್ಲೆಯಾದ್ಯಂತ ಬಿಸಿ ಗಾಳಿ ಹೆಚ್ಚಳ ಸಾಧ್ಯತೆ: ಹವಾಮಾನ ಇಲಾಖೆಯಿಂದ ಆರೆಂಜ್ ಅಲರ್ಟ್ ಘೋಷಣೆ.

**ಈಗ ವಾರ್ತೆಗಳ ವಿವರ**

*******

**ಹಲವು ವಿಧಾಯಕ ಕಾರ್ಯಕ್ರಮಗಳ** ಮೂಲಕ ಭಾರತ ರತ್ನ, ಸಂವಿಧಾನ ಶಿಲ್ಪಿ ಹಾಗೂ ಆಧುನಿಕ ಭಾರತದ ನಿರ್ಮಾತೃ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆಯನ್ನು ನಾಡಿನಾದ್ಯಂತ ಇಂದು ಆಚರಿಸಲಾಗುತ್ತಿದೆ. ಬೆಂಗಳೂರಿನಲ್ಲಿ ನಡೆಯುವ ಮುಖ್ಯ ಸಮಾರಂಭದಲ್ಲಿ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಶೋಷಿತರ ಪರವಾಗಿ ಹೋರಾಟ/ ಸಾಹಿತ್ಯ, ಪತ್ರಿಕೋದ್ಯಮ, ಸಾಹಿತ್ಯ, ಸಂಘಟನೆ, ದೇವದಾಸಿ ವಿಮುಕ್ತಿ ಕ್ಷೇತ್ರಗಳಲ್ಲಿ ಅನನ್ಯ ಸಾಧನೆ ಮಾಡಿರುವ ಮಂಗಳೂರು ವಿಜಯ, ಸಿ.ಎಂ.ಮುನಿಯಪ್ಪ, ಎಚ್.ಎನ್.ಅಣ್ಣಯ್ಯ, ಡಾ.ಹನುಮಂತರಾಯ ದೊಡ್ಮನಿ ಮತ್ತು ಶೋಭಾ ಗಸ್ತಿ ಅವರಿಗೆ ಪ್ರತಿಷ್ಠಿತ ಡಾ.ಬಿ.ಆರ್.ಅಂಬೇಡ್ಕರ್ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಗುತ್ತದೆ. **ಬೆಂಗಳೂರು ನಗರದ** ಡಾ.ಬಿ.ಆರ್.ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ವಿಶ್ವವಿದ್ಯಾಲಯದಲ್ಲಿ ಇಂದು ಅಂಬೇಡ್ಕರ್ ಅವರ 135ನೇ ಜಯಂತಿ ಕಾರ್ಯಕ್ರಮ ಆಯೋಜಿಸಲಾಗಿದ್ದು, ವಿಶ್ವವಿದ್ಯಾಲಯದ ಮುಂಭಾಗದಲ್ಲಿರುವ ಅಂಬೇಡ್ಕರ್ ಅವರ ಪುತ್ಥಳಿಗೆ ಪುಷ್ಪನಮನ ಸಲ್ಲಿಸಿ, ಗೌರವ ಸಲ್ಲಿಸಲಾಗುವುದು. ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆ ಸಂಸ್ಥೆಯ ಆಡಳಿತ ಮಂಡಳಿ ಅಧ್ಯಕ್ಷ ಡಾ.ಅಶೋಕ್ ದಳವಾಯಿ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. **ವಿವಿಧ**

**ಸಂಘಟನೆಗಳ** ಸಹಯೋಗದಲ್ಲಿ ಕೋಲಾರ ಜಿಲ್ಲಾಡಳಿತ ಆಯೋಜಿಸಿರುವ ಡಾ.ಬಿ.ಆರ್.ಅಂಬೇಡ್ಕರ ಅವರ ಜಯಂತ್ಯುತ್ಸವದ ಪ್ರಯುಕ್ತ ಪ್ರತಿಯೊಂದು ಗ್ರಾಮಗಳಿಂದ ಪಲ್ಲಕ್ಕಿಗಳನ್ನು ತರುವ ಮೂಲಕ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ.

*******

**ಗ್ಯಾರಂಟಿಗಳ ಜೊತೆಗೆ** ಅಭಿವೃದ್ಧಿಯನ್ನೂ ರಾಜ್ಯ ಸರ್ಕಾರ ಸಾಧ್ಯವಾಗಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಪಾದಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆ ಹಂದೂರು ಗ್ರಾಮದಿಂದ ನರಸಿಂಹರಾಜಪುರಕ್ಕೆ ಸಂಪರ್ಕಿಸುವ ಭದ್ರಾ ಹಿನ್ನೀರಿನಲ್ಲಿ ನಿರ್ಮಿಸಿರುವ ಸೇತುವೆ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸರ್ಕಾರದಿಂದ ಗ್ಯಾರಂಟಿಗಳಿಗೆ ಇದುವರೆಗೆ 1.30 ಲಕ್ಷ ಕೋಟಿಗಳನ್ನು ವೆಚ್ಚ ಮಾಡಲಾಗಿದೆ. ರಾಜ್ಯದ ಗ್ಯಾರಂಟಿಗಳನ್ನು ಟೀಕಿಸುವ ಬಿಜೆಪಿ ಇತರೆ ರಾಜ್ಯಗಳಲ್ಲಿ ಅವುಗಳನ್ನೇ ಅನುಸರಿಸುತ್ತಿದ್ದಾರೆ ಎಂದರು. ಜನಕಲ್ಯಾಣಕ್ಕೆ ಒತ್ತಾಸೆಯಾಗಿರುವ ಸರ್ಕಾರದ ಗ್ಯಾರಂಟಿ ಯೋಜನೆಗಳೂ ಒಂದು ವಿಧದ ಅಭಿವೃದ್ಧಿಯಾಗಿದ್ದು, ಗ್ಯಾರಂಟಿಗಳ ನಡುವೆಯೂ ರಾಜ್ಯದ ಆರ್ಥಿಕ ಸ್ಥಿತಿ ಕೇಂದ್ರಕ್ಕಿಂತ ಉತ್ತಮವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

*******

**ಜನರ ಆರೋಗ್ಯ ಮತ್ತು ಸ್ವಚ್ಛತೆ** ಬಗ್ಗೆ ಸರ್ಕಾರ ನಿರ್ಲಕ್ಷ್ಯ ವಹಿಸಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಆರೋಪಿಸಿದ್ದಾರೆ.ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಅವರು, ಜಾಗತಿಕ ಮಟ್ಟದಲ್ಲಿ ಹೆಸರಾಗಿರುವ ಐಟಿ ನಗರ ಬೆಂಗಳೂರು ಇಂದು ಕಸದ ಗುಡ್ಡವಾಗಿ ಮಾರ್ಪಟ್ಟಿದೆ. ಗ್ರೇಟರ್ ಬೆಂಗಳೂರು ಅಥಾರಿಟಿ ಮುಖ್ಯ ಕಚೇರಿಯಿಂದ ಕೆಲವೇ ಅಂತರದಲ್ಲಿರುವ ರಸ್ತೆಗಳಲ್ಲಿಯೇ 30 ದಿನಕ್ಕೊಮ್ಮೆ ಮಾತ್ರ ಕಸ ವಿಲೇವಾರಿ ನಡೆಯುತ್ತಿರುವುದು ಆಡಳಿತದ ವೈಫಲ್ಯಕ್ಕೆ ಉದಾಹರಣೆ ಎಂದಿದ್ದಾರೆ. ಸಮರ್ಪಕ ವಿಲೇವಾರಿಯಾಗದ ಕಸ ಕೇವಲ ಸೌಂದರ್ಯ ಹಾನಿಗೆ ಮಾತ್ರ ಕಾರಣವಾಗದೇ, ಬಿರು ಬೇಸಿಗೆಯಲ್ಲಿ ಡೆಂಗ್ಯೂ ಮತ್ತು ವೈರಲ್ ಸೋಂಕುಗಳ ಹರಡುವಿಕೆಗೆ ಕಾರಣವಾಗುವ ಅಪಾಯವಿದೆ ಎಂದು ಆರ್.ಅಶೋಕ ಎಚ್ಚರಿಸಿದ್ದಾರೆ.

*******

**ಕಂದಾಯ ಗ್ರಾಮ ಮತ್ತು** ಉಪ ಗ್ರಾಮ ವಿಶೇಷ ಅಭಿಯಾನದಡಿ, ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಅಧಿಕೃತ ಹಕ್ಕು ದಾಖಲೆ ಪತ್ರಗಳನ್ನು ಸರ್ಕಾರದಿಂದಲೇ ಉಚಿತವಾಗಿ ಮಾಡಿಕೊಳ್ಳಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ ಕೋಟಗಲ್ ಗ್ರಾಮದಲ್ಲಿ ಜಿಲ್ಲಾಡಳಿತ ಹಮ್ಮಿಕೊಂಡಿದ್ದ ವಿಶೇಷ ಕಂದಾಯ ಗ್ರಾಮ ಮತ್ತು ಉಪ ಕಂದಾಯ ಗ್ರಾಮಗಳ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಸರ್ಕಾರಿ ಅಥವಾ ಖಾಸಗಿ ಜಮೀನುಗಳಲ್ಲಿ ಮನೆಗಳನ್ನು ನಿರ್ಮಿಸಿಕೊಂಡು ಹಲವಾರು ವರ್ಷಗಳಿಂದ ದಾಖಲೆ ಇಲ್ಲದೆ ಇರುವ ಕುಟುಂಬಗಳನ್ನು ಗುರುತಿಸಲಾಗಿದ್ದು, 1 ಲಕ್ಷ 40 ಸಾವಿರ ಮನೆಗಳಿಗೆ ಅಧಿಕೃತ ಹಕ್ಕುಪತ್ರಗಳ ಇ ಸ್ವತ್ತುಗಳನ್ನು ನೀಡುವ ಗುರಿ ಹೊಂದಲಾಗಿದೆ ಎಂದರು. ಚಿಂತಾಮಣಿ ತಾಲ್ಲೂಕು ಒಂದರಲ್ಲಿಯೇ 15 ಸಾವಿರದ 202 ದಾಖಲೆರಹಿತ ಮನೆಗಳಿಗೆ ಇ ಸ್ವತ್ತು ದಾಖಲೆ ನೀಡಲಾಗುವುದು ಎಂದು ಸಚಿವರು ಹೇಳಿದರು.

*******

**ಶಾಸನ ಸಭೆಗಳಲ್ಲಿ ಶೇಕಡ** 33 ರ ಷ್ಟು ಮಹಿಳಾ ಮೀಸಲಾತಿಯಿಂದ ಪ್ರಜಾಪ್ರಭುತ್ವ ಮತ್ತ ಷ್ಟು ಬಲಗೊಳ್ಳಲಿದ್ದು, ವಿಕಸಿತ ಭಾರತ ಗುರಿ ಸಾಧನೆಗೆ ಪೂರಕವಾಗಲಿದೆ ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ದೆಹಲಿಯಲ್ಲಿ ನಡೆದ 'ನಾರಿಶಕ್ತಿ ವಂದನ್' ರಾಷ್ಟ್ರೀಯ ಸಮ್ಮೇಳನದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ದೇಶದ ಅಭಿವೃದ್ಧಿ ಯಾತ್ರೆಯಲ್ಲಿ ಮಹಿಳಾ ಮೀಸಲಾತಿ ಅತ್ಯಂತ ಮಹತ್ವಪೂರ್ಣ ನಿರ್ಣಯಗಳಲ್ಲಿ ಒಂದಾಗಿದ್ದು, ಹೊಸ ಇತಿಹಾಸ ರಚನೆಗೆ ನಾಂದಿಯಾಗಿದೆ. ಶಾಸನ ಸಭೆಗಳಲ್ಲಿ ಮಹಿಳಾ ಪ್ರಾತಿನಿಧ್ಯ ಹೆಚ್ಚುವುದರಿಂದ ವ್ಯವಸ್ಥೆಯಲ್ಲಿ ಸಂವೇದನಾಶೀಲತೆ ಮೂಡಲಿದೆ ಎಂದರು. 2014 ರಿಂದೀಚೆಗೆ NDA ಸರ್ಕಾರ ಎಲ್ಲ ಹಂತಗಳಲ್ಲಿ ಮಹಿಳೆಯರಿಗೆ ಹೆಚ್ಚಿನ ಪ್ರಾತಿನಿದ್ಯ ಕಲ್ಪಿಸಿದ್ದು, ವಿವಿಧ ಯೋಜನೆಗಳಲ್ಲಿ ಮಹಿಳೆಯರಿಗೆ ಹೆಚ್ಚಿನ ಸೌಲಭ್ಯ ಒದಗಿಸಿದೆ ಎಂದು ಪ್ರಧಾನಿ ಹೇಳಿದರು.

*******

**ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..**

**ಪ್ರಕಟಣೆ-42 ಸೆಕೆಂಡ್ಸ್**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

*******

**ಕೇಂದ್ರ ಸರಕಾರದ ನಾರಿ ಶಕ್ತಿ** ವಂದನಾ ಅಭಿಯಾನ ಕಾಯ್ದೆಕ್ರಾಂತಿಕಾರಕ ಹೆಜ್ಜೆ ಎಂದು ವಿಜಯಪುರದ ಸಾಮಾಜಿಕ ಕಾರ್ಯಕರ್ತೆ ಶೈಲಾ ಪೂಜಾರಿ ಅಭಿಪ್ರಾಯಪಟ್ಟಿದ್ದಾರೆ. ಈ ಕುರಿತು ಆಕಾಶವಾಣಿಯೊಂದಿಗೆ ಮಾತನಾಡಿದ ಅವರು,ಕೇಂದ್ರ ಸರಕಾರದ ನಾರಿ ಶಕ್ತಿ ವಂದನಾ ಅಭಿಯಾನ ಐತಿಹಾಸಿಕ ಕಾಯ್ದೆ. ಸ್ತ್ರೀ ಅಭ್ಯದಯಕ್ಕಾಗಿ ಇಟ್ಟ ಈ ಹೆಜ್ಜೆ ಕ್ರಾಂತಿಕಾರಕ. ಅದರಲ್ಲೂಹಿಂದುಳಿದ ವರ್ಗಗಳ ಮಹಿಳೆಯರಿಗೆ ರಾಜಕೀಯವಾಗಿ ಸ್ಪರ್ಧಿಸಲು ಹಾಗೂ ಅಭಿವೃದ್ಧಿ ಹೊಂದಲು ಈ ಕಾಯ್ದೆ ಸಹಕಾರಿ ಎಂದು ಶೈಲಾ ಪೂಜಾರಿ ಹೇಳಿದ್ದಾರೆ.

**ಧ್ವನಿ-ಶೈಲಾ ಪೂಜಾರಿ-37 ಸೆಕೆಂಡ್ಸ್**

*******

**ಮಹಿಳೆಯರಿಗೆ ಲೋಕಸಭೆ ಮತ್ತು** ವಿಧಾನ ಸಭೆಗಳಲ್ಲಿ ಶೇಕಡಾ 33 ರಷ್ಟು ಮೀಸಲಾತಿ ಕಲ್ಪಿಸುವ ನಾರಿ ಶಕ್ತಿ ವಂದನಾ ಅಧಿನಿಯಮವನ್ನು ಬೆಂಬಲಿಸಿ ಬಿಜೆಪಿ ಹುಬ್ಬಳ್ಳಿ ಧಾರವಾಡ ಮಹಾನಗರ ಜಿಲ್ಲಾ ಘಟಕದ ವತಿಯಿಂದ ಹುಬ್ಬಳ್ಳಿಯಲ್ಲಿ ಬೈಕ್ ರ್‍ಯಾಲಿ ಆಯೋಜಿಸಲಾಗಿತ್ತು. ರ್‍ಯಾಲಿಗೆ ಶಾಸಕ ಮಹೇಶ ಟೆಂಗಿನಕಾಯಿ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಹೆಣ್ಣುಮಕ್ಕಳ ರಕ್ಷಣೆ ಮತ್ತು ಶಿಕ್ಷಣಕ್ಕಾಗಿ ತಂದ 'ಬೇಟಿ ಬಚಾವೋ ಬೇಟಿ ಪಢಾವೋ' ಯೋಜನೆಯಿಂದ ಹಿಡಿದು, ಶಾಸನಸಭೆಗಳಲ್ಲಿ

ಮಹಿಳೆಯರಿಗೆ ಅಧಿಕಾರ ನೀಡುವ 'ನಾರಿ ಶಕ್ತಿ ವಂದನಾ ಅಧಿನಿಯಮ'ದವರೆಗೆ ಪ್ರಧಾನಿ ನರೇಂದ್ರ ಮೋದಿ ಅವರು ಕೈಗೊಂಡಿರುವ ಐತಿಹಾಸಿಕ ಕ್ರಮಗಳು ಅಭಿನಂದನಾರ್ಹ ಎಂದರು.

*******

**ಬೆಂಗಳೂರಿನಿಂದ ಮುಂಬೈಗೆ** ನೂತನ 'ವಂದೇ ಭಾರತ್ ಸ್ಲೀಪರ್ ರೈಲು' ಆರಂಭಕ್ಕೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ನೂತನ ವಂದೇ ಭಾರತ್ ಸ್ಲೀಪರ್ ರೈಲು ಕೆ.ಎಸ್.ಆರ್ ಬೆಂಗಳೂರು ನಿಲ್ದಾಣದಿಂದ ಕಲ್ಯಾಣ ಕರ್ನಾಟಕದ ಮೂಲಕ ಛತ್ರಪತಿ ಶಿವಾಜಿ ಮಹಾರಾಜ್ ಟರ್ಮಿನಲ್‌ಗೆ ಸಂಚರಿಸಲಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಈ ರೈಲು ಬೆಂಗಳೂರಿನಿಂದ ಕರ್ನಾಟಕದ ಮಧ್ಯಭಾಗವಾದ ತುಮಕೂರು, ದಾವಣಗೆರೆ, ಹಾವೇರಿ, ಹುಬ್ಬಳ್ಳಿ–ಧಾರವಾಡ ಮತ್ತು ಬೆಳಗಾವಿ ಮೂಲಕ ವಾಣಿಜ್ಯ ನಗರಿ ಮುಂಬೈಗೆ ತೆರಳುತ್ತದೆ.

*******

**ಕಲಬುರಗಿ ಜಿಲ್ಲೆಯಾದ್ಯಂತ** ನಾಳೆಯಿಂದ 17 ರವರೆಗೆ ಬಿಸಿ ಗಾಳಿ ಪರಿಸ್ಥಿತಿ ಹೆಚ್ಚಾಗುವ ಸಾಧ್ಯತೆಯಿದ್ದು, ಮುನ್ನೆಚ್ಚರಿಕೆಯಾಗಿ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಘೋಷಿಸಿದೆ. ಈ ಕುರಿತು ಮಾಹಿತಿ ನೀಡಿರುವ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು, ಬಿಸಿಲಿನ ಹೊಡೆತದಿಂದ ರಕ್ಷಿಸಿಕೊಳ್ಳಲು ಸಾರ್ವಜನಿಕರು ವಿಶೇ ವಾಗಿ ಮಧ್ಯಾಹ್ನ 12 ರಿಂದ ಸಂಜೆ 4 ಗಂಟೆಯವರೆಗೆ ಮನೆಯಿಂದ ಹೊರ ಹೋಗುವದನ್ನು ಸಾಧ್ಯವಾದ ್ಟ ಮಟ್ಟಿಗೆ ತಪ್ಪಿಸುವಂತೆ ಸಲಹೆ ನೀಡಿದ್ದಾರೆ. ದೇಹವನ್ನು ನಿರ್ಜಲೀಕರಣಗೊಳಿಸುವ ಆಲ್ಕೋಹಾಲ್, ಕಾರ್ಬೋನೇಟೆಡ್ ತಂಪು ಪಾನೀಯಗಳನ್ನು, ಚಹಾ, ಕಾಫಿ ಹಾಗೂ ಹೆಚ್ಚಿನ ಪ್ರೋಟೀನ್ ಆಹಾರ ಮತ್ತು ಹಳೆಯ ಆಹಾರವನ್ನು ಸೇವಿಸದೆ ಓ.ಆರ್.ಎಸ್. ಅಲ್ಲದೆ ಮನೆಯಲ್ಲಿ ತಯಾರಿಸಿದ ಪಾನೀಯಗಳಾದ ಲಸ್ಸಿ, ತೋರಣಿ (ಅಕ್ಕಿ ನೀರು), ನಿಂಬೆ ನೀರು, ಮಜ್ಜಿಗೆ, ಇತ್ಯಾದಿಗಳನ್ನು ಸೇವಿಸದಲ್ಲಿ ದೇಹ ಮರು–ಜಲೀಕರಣಗೊಳ್ಳುತ್ತದೆ. ಬಿಸಿಲಿನಿಂದ ಮೂರ್ಛೆ ಹೋದಲ್ಲಿ ಅಥವಾ ಅನಾರೋಗ್ಯ ಎನಿಸಿದಲ್ಲಿ ತಕ್ಷಣ ವೈದ್ಯರನ್ನು ಸಂಪರ್ಕಿಸುವಂತೆ ಜಿಲ್ಲಾಧಿಕಾರಿ ಕೋರಿದ್ದಾರೆ.

*******

## ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

**ಹಲವು ವಿಧಾಯಕ** ಕಾರ್ಯಕ್ರಮಗಳ ಮೂಲಕ ಇಂದು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮ ದಿನ ಆಚರಣೆ.

**ಗ್ಯಾರಂಟಿಗಳ ಜೊತೆಗೆ** ಅಭಿವೃದ್ಧಿ ಸಾಧ್ಯವಾಗಿಸಿದ ಸರ್ಕಾರ–ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಪಾದನೆ.

**ಶಾಸನ ಸಭೆಗಳಲ್ಲಿ ಮಹಿಳಾ** ಪ್ರಾತಿನಿಧ್ಯ ಹೆಚ್ಚುವುದರಿಂದ ವ್ಯವಸ್ಥೆಯಲ್ಲಿ ಸಂವೇದನಾಶೀಲತೆ–ಪ್ರಧಾನ ಮಂತ್ರಿ ನರೇಂದ್ರ ಮೋದಿ ಅಭಿಮತ.

**ನಾಳೆಯಿಂದ ಮೂರು ದಿನಗಳ ಕಾಲ** ಕಲಬುರಗಿ ಜಿಲ್ಲೆಯಾದ್ಯಂತ ಬಿಸಿ ಗಾಳಿ ಹೆಚ್ಚಳ ಸಾಧ್ಯತೆ: ಹವಾಮಾನ ಇಲಾಖೆಯಿಂದ ಆರೆಂಜ್ ಅಲರ್ಟ್ ಘೋಷಣೆ.

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

******END******